## ಕರ್ನಾಟಕ ಸರ್ಕಾರದ ನಡವಳಿಗಳು

ಆಯುಕ್ತರು, ...
ಕ್ರ ಸಂ : 13561 9/1/19
ದಿನಾಂಕ : 7/1/19
ಉ.ನಿ ಜ.ನಿ ಅ.ನಿ
ಶಾಖೆ: ಶಾಖೆ: ಶಾಖೆ:

ವಿಷಯ: ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ ಐ.ಐ.ಎಂ/ ಐ.ಐ.ಎಸ್.ಸಿ/ ಎನ್.ಐ.ಟಿ, ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು 1 ಲಕ್ಷ ರೂ.ಗಳಿಂದ 2 ಲಕ್ಷ ರೂ.ಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:
1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ಇಡಿ-7/ಸಿಆರ್-167/2017-18, ದಿನಾಂಕ: 16-02-2018 ಮತ್ತು 20-09-2018
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ:ಪವಕನಿ/ಇಡಿ-1/ಸಿಆರ್-8/2017-18, ದಿನಾಂಕ: 15-06-2018.

ಅ.ನಿ.
ಆಡಳಿತ

*****

ಜಂ.ನಿ.
ಶಿಕ್ಷಣ

### ಪ್ರಸ್ತಾವನೆ:

2018-19 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 168 ರಲ್ಲಿ **"ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ ಐ.ಐ.ಎಂ/ ಐ.ಐ.ಎಸ್.ಸಿ/ ಎನ್.ಐ ಟಿ, ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತುಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು 1 ಲಕ್ಷ ರೂ.ಗಳಿಂದ 2 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು"** ಎಂದು ಘೋಷಿಸಲಾಗಿತ್ತು.

ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ ಐ.ಐ.ಎಂ/ ಐ.ಐ.ಎಸ್.ಸಿ/ ಎನ್.ಐ ಟಿ, ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು 1 ಲಕ್ಷ ರೂ.ಗಳಿಂದ 2 ಲಕ್ಷ ರೂ.ಗಳಿಗೆ ಹೆಚ್ಚಿಸಿ ಇದಕ್ಕೆ ತಗಲುವ ವೆಚ್ಚವನ್ನು ರಾಜ್ಯ ವಲಯ ಯೋಜನಾ ರಾಜಸ್ವ ಲೆಕ್ಕಶೀರ್ಷಿಕೆ: 2225-01-796-0-02 (Object code-059)ರಲ್ಲಿ Schemes proposed under various development programmes for SCs ಕಾರ್ಯಕ್ರಮದಡಿ ಭರಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರಗಳ ದಿನಾಂಕ: 16-02-2018 ಮತ್ತು 20-09-2018 ರಲ್ಲಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ತಗಲುವ ವೆಚ್ಚವನ್ನು ಪರಿಶಿಷ್ಟ ಪಂಗಡದವರ ವಿವಿಧ ಅಭಿವೃದ್ಧಿ ಯೋಜನೆಯ ಲೆಕ್ಕ ಶೀರ್ಷಿಕೆ: 2225-02-794-0-05 ರಡಿ ನಿಗದಿಪಡಿಸಿಕೊಳ್ಳುವ ಅನುದಾನದಲ್ಲಿ ನಿರ್ದೇಶಕರು, ಪರಿಶಿಷ್ಟ ಪಂಗಡ ಕಲ್ಯಾಣ ನಿರ್ದೇಶನಾಲಯ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಏಕ ಕಡತ ಪ್ರಸ್ತಾವನೆಗಳಲ್ಲಿ ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ ಐ.ಐ.ಎಂ/ ಐ.ಐ.ಎಸ್.ಸಿ/ ಎನ್.ಐ ಟಿ, ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು 1 ಲಕ್ಷ ರೂ.ಗಳಿಂದ 2 ಲಕ್ಷ ರೂ.ಗಳಿಗೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

----2)

8.1.19

**ಸರ್ಕಾರಿ ಆದೇಶ ಸಂಖ್ಯೆ:ಸಕಇ 165 ಪಕವಿ 2018, ಬೆಂಗಳೂರು, ದಿನಾಂಕ: 27-12-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ ಐ.ಐ.ಎಂ/ ಐ.ಐ.ಎಸ್.ಸಿ/ ಎನ್.ಐ ಟಿ, ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು ರೂ.1.00 ಲಕ್ಷಗಳಿಂದ ರೂ.2.00 ಲಕ್ಷ(ಎರಡು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಅನುಬಂಧದಲ್ಲಿ ನೀಡಿರುವ ಷರತ್ತುಗಳಿಗೊಳಪಟ್ಟು ಹೆಚ್ಚಿಸಿದೆ.

ಈ ಕಾರ್ಯಕ್ರಮಕ್ಕೆ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ತಗಲುವ ವೆಚ್ಚವನ್ನು ರಾಜ್ಯ ವಲಯಯೋಜನಾರಾಜಸ್ವ ಲೆಕ್ಕಶೀರ್ಷಿಕೆ: 2225-01-796-0-02 (Object code-059)ರಲ್ಲಿSchemes proposed under various development programmes for SCs ಕಾರ್ಯಕ್ರಮದಡಿ ಭರಿಸಲು ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ತಗಲುವ ವೆಚ್ಚವನ್ನು ಪರಿಶಿಷ್ಟ ಪಂಗಡದವರ ವಿವಿಧಅಭಿವೃದ್ಧಿಯೋಜನೆಯ ಲೆಕ್ಕಶೀರ್ಷಿಕೆ: 2225-02-794-0-05 ರಡಿ ನಿಗದಿಪಡಿಸಿಕೊಳ್ಳುವ ಅನುದಾನದಲ್ಲಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 783 ವೆಚ್ಚ-3/2018, ದಿನಾಂಕ: 03-12-2018 ರಂದು ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 85 ಐಎಂಎಂ 2018, ದಿನಾಂಕ: 27-07-2018 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/12/18

(ಗೋಪಾಲ್)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.
5. ನಿರ್ದೇಶಕರು, ಪಿ.ಎಂ.ಐ, ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂಖ್ಯೆ. 206, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ. ವಿಕಾಸಸೌಧ.

*****

ಸರ್ಕಾರಿ ಆದೇಶ ಸಂಖ್ಯೆ:ಸಕಇ 165 ಪಕವಿ 2018, ಬೆಂಗಳೂರು, ದಿನಾಂಕ: -12-2018 ಕ್ಕೆ

ಅನುಬಂಧ

1. ಷರತ್ತುಗಳು:-

1. ವಿದ್ಯಾರ್ಥಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
2. ಕರ್ನಾಟಕ ರಾಜ್ಯದ ಮೂಲ ನಿವಾಸಿಯಾಗಿರಬೇಕು (ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರು ನೀಡಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಲಗತ್ತಿಸಿರಬೇಕು).
3. ಸಂಬಂಧಪಟ್ಟ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗಕ್ಕೆ ಆಯ್ಕೆಯಾಗಿರಬೇಕು. (ಆಯ್ಕೆ ಪತ್ರದ ದೃಢೀಕೃತ ಪ್ರತಿಯನ್ನು ಲಗತ್ತಿಸಿರಬೇಕು).
4. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಲ್ಲಾಗಲೀ ಅಥವಾ ಇತರೆ ಮೂಲಗಳಿಂದ ವ್ಯಾಸಂಗಕ್ಕೆ ಶುಲ್ಕಗಳ ಮರು ಪಾವತಿಯನ್ನು ಪಡೆದಿರಬಾರದು.
5. ಅರ್ಜಿ ನಮೂನೆ: ಈ ಯೋಜನೆಯಡಿ ನಿಗಧಿ ಪಡಿಸಿರುವ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ ಪತ್ರದೊಂದಿಗೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಮತ್ತು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯಇವರಿಗೆ ಸಲ್ಲಿಸುವುದು.

ಅರ್ಜಿ ನಮೂನೆ:-

| | | |
|---|---|---|
| 1. | ವಿದ್ಯಾರ್ಥಿ ಹೆಸರು: | ವಿದ್ಯಾರ್ಥಿಯ ದೃಢೀಕೃತ ಭಾವಚಿತ್ರ. |
| 2 | ತಂದೆ: ಪೋಷಕರ ಹೆಸರು: | |
| 3 | ಖಾಯಂ ವಿಳಾಸ : | |
| 4 | ಜಾತಿ: ಉಪ ಜಾತಿ (ಸಂಬಂಧಪಟ್ಟತಾಲ್ಲೂಕಿನ ತಹಶೀಲ್ದಾರರು ನೀಡಿರುವಜಾತಿ ಪ್ರಮಾಣ ಪತ್ರದದೃಢೀಕೃತ ಪ್ರತಿಯನ್ನು ಲಗತ್ತಿಸಿರಬೇಕು). | |
| 5 | ಪ್ರವೇಶ ಪಡೆದ ಶಿಕ್ಷಣ ಸಂಸ್ಥೆಯ ಹೆಸರು ಮತ್ತು ವಿಳಾಸ | |
| 6 | ಪ್ರವೇಶ ಪಡೆದಕೋರ್ಸ್ | |
| 7 | ದಾಖಲಾತಿ ಸಂಖ್ಯೆ: (ದಾಖಲಾತಿಗಾಗಿಕಟ್ಟಿರುವ ಶುಲ್ಕದ ರಸೀದಿಯ ಪ್ರತಿ ಲಗತ್ತಿಸುವುದು. | |
| 8 | ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಲ್ಲಾಗಲೀಅಥವಾಇತರೆ ಮೂಲಗಳಿಂದ ವ್ಯಾಸಂಗಕ್ಕೆ ಶುಲ್ಕಗಳ ಮರು ಪಾವತಿ ಪಡೆದಿದ್ದಾರೆಯೇ? ಹಾಗಿದ್ದಲ್ಲಿ ವಿವರಗಳನ್ನು ನೀಡುವುದು. | |

ವಿದ್ಯಾರ್ಥಿಯ ಸಹಿ/-

೦

## ದೃಢೀಕರಣ

ಶ್ರೀ / ಶ್ರೀಮತಿ : ________________ ಇವರು ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ __________ ಜಾತಿಗೆ ಸೇರಿದವರಾಗಿದ್ದು, ಕರ್ನಾಟಕ ರಾಜ್ಯದ ಮೂಲ ನಿವಾಸಿಯಾಗಿರುತ್ತಾರೆ. ಇವರು ಈ ಸಂಸ್ಥೆಯಲ್ಲಿ ______ ತರಗತಿಗೆ ________ ಸಾಲಿನಲ್ಲಿ ಪ್ರವೇಶ ಪಡೆದಿದ್ದು, ಪ್ರವೇಶ ಸಮಯದಲ್ಲಿ ___________ ರೂ.ಗಳನ್ನು ಕಟ್ಟಿರುತ್ತಾರೆ. ಇವರು ಕಟ್ಟಿರುವ ಶುಲ್ಕಗಳನ್ನು ವಿದ್ಯಾರ್ಥಿ ವೇತನ ಅಥವಾ ಇನ್ನಾವುದೇ ಮೂಲದಿಂದ ಪಾವತಿಸಿರುವುದಿಲ್ಲ.

ಶಿಕ್ಷಣ ಸಂಸ್ಥೆಯ ಮುಖ್ಯಸ್ಥರ
ಸಹಿ ಮತ್ತುಮೊಹರು